# Bangalore
# Regional News
# 15.02.2025 / 18.40 hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಬೆಂಗಳೂರು ಸಮೀಪ ಹೊಸ ಮೊಬೈಲ್ ಉತ್ಪಾದನಾ ಕಂಪನಿ ಆರಂಭ ; ೪೦ ಸಾವಿರ ಉದ್ಯೋಗ ಸೃಷ್ಟಿ - ಕೇಂದ್ರ ಸಚಿವ ಅಶ್ವಿನಿ ವೈಷ್ಣವ್

೨. ಗೋದಾವರಿ, ಕೃಷ್ಣ, ಕಾವೇರಿ ಯೋಜನೆಯಲ್ಲಿ ರಾಜ್ಯಕ್ಕೆ ೨೫ ಟಿಎಂಸಿ ನೀರು ಸಿಗಲೇಬೇಕು - ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ ಆಗ್ರಹ

೩. ಯೋಧರ ಸಮಸ್ಯೆ ಬಗೆಹರಿಸಲು ಪ್ರಾಮಾಣಿಕ ಪ್ರಯತ್ನ - ಕೇಂದ್ರ ಉಕ್ಕು ಸಚಿವ ಹೆಚ್.ಡಿ. ಕುಮಾರಸ್ವಾಮಿ ಸ್ಪಷ್ಟನೆ

೪. ವಿಶ್ವ ವಿದ್ಯಾಲಯಗಳನ್ನು ಮುಚ್ಚುವ ರಾಜ್ಯ ಸರ್ಕಾರದ ನಿರ್ಧಾರದ ವಿರುದ್ಧ ಬಿಜೆಪಿ ಅಸಮಾಧಾನ

<><*<><>*><>

ಬೆಂಗಳೂರು ಸಮೀಪ ಹೊಸ ಮೊಬೈಲ್ ಉತ್ಪಾದನಾ ಕಂಪನಿ ಆರಂಭಿಸಲಾಗುತ್ತಿದ್ದು, ೪೦ ಸಾವಿರ ಉದ್ಯೋಗಾವಕಾಶಗಳು ಸೃಷ್ಟಿಯಾಗಲಿವೆ ಎಂದು ಕೇಂದ್ರ ರೈಲ್ವೆ, ವಾರ್ತಾ ಮತ್ತು ಪ್ರಸಾರ ಖಾತೆ ಹಾಗೂ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಖಾತೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಬಾರಿಯ ಬಜೆಟ್‌ನಲ್ಲಿ ಸಣ್ಣ ಹಾಗೂ ಅತಿ ಸಣ್ಣ ಕೈಗಾರಿಕೆಗಳಿಗೆ ಸಾಲ ಸೌಲಭ್ಯವನ್ನು ಸುಲಭ ಕಂತುಗಳಲ್ಲಿ ಪಾವತಿಸುವ ಸುಲಲಿತ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಹೇಳಿದ್ದಾರೆ. ಭಾರತದ ಸಾಲದ ಹೊರೆ ಜಿಡಿಪಿಯ ಶೇಕಡ ೫೬ರಷ್ಟು ಇರುವುದು ಉತ್ತಮ ಆರ್ಥಿಕ ವ್ಯವಸ್ಥೆಯಾಗಿದೆ. ಅಭಿವೃದ್ಧಿ ಹೊಂದಿದ ರಾಷ್ಟ್ರಗಳ ಹೋಲಿಕೆಯಲ್ಲಿ ಭಾರತದ ಸಾಲದ ಹೊರೆ ಅತಿ ಕಡಿಮೆ ಎಂದು ಅಭಿಪ್ರಾಯಪಟ್ಟಿದ್ದಾರೆ. ವಿತ್ತೀಯ ಕೊರತೆಯನ್ನು ೪.೪ ಪ್ರತಿಶತಕ್ಕೆ ಸೀಮಿತಗೊಳಿಸಲು ಕೇಂದ್ರ ಸರ್ಕಾರ ಯಶಸ್ವಿಯಾಗಿದೆ ಎಂದು ಅವರು ತಿಳಿಸಿದ್ದಾರೆ.

<><*<><>*><>

ಈ ಬಾರಿಯ ಆಯವ್ಯಯದಲ್ಲಿ ಕರ್ನಾಟಕಕ್ಕೆ ಶೇಕಡ ೯ ರಷ್ಟು ಅನುದಾನ ನೀಡಲಾಗಿದ್ದು, ರಾಜ್ಯದ ರೈಲ್ವೆಗೆ ೭ ಸಾವಿರದ ೫೬೪ ಕೋಟಿ ರೂಪಾಯಿ ಅನುದಾನ ಒದಗಿಸಲಾಗಿದೆ ಎಂದು ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ಬೆಂಗಳೂರಿನ ಬಿಜೆಪಿ ಕಚೇರಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಮೃತ್ ಸ್ಟೇಷನ್ ಯೋಜನೆಯಡಿ ೬೧ ರೈಲ್ವೆ ನಿಲ್ದಾಣಗಳ ಮರು ನಿರ್ಮಾಣವಾಗಿದೆ. ೧ ಸಾವಿರದ ೬೫೨ ಕಿಲೋಮೀಟರ್ ಹೊಸ ರೈಲ್ವೆ ಮಾರ್ಗವನ್ನು ನಿರ್ಮಿಸಲಾಗಿದೆ ಎಂದು ಹೇಳಿದ್ದಾರೆ. ಈ ರೈಲ್ವೆ ಹಳಿ ಶ್ರೀಲಂಕಾದ ಒಟ್ಟು ರೈಲ್ವೆ ಜಾಲಕ್ಕೆ ಅಧಿಕ ಪ್ರಮಾಣದಾಗಿದೆ ಎಂದು ತಿಳಿಸಿದ್ದಾರೆ. ಹತ್ತು ವಂದೇ ಭಾರತ್ ರೈಲುಗಳು ಕರ್ನಾಟಕದಲ್ಲಿ ಈಗಾಗಲೇ ಸಂಚರಿಸುತ್ತಿದ್ದು, ಇನ್ನು ಹೆಚ್ಚಿನ ರೈಲು ನೀಡಲು ಸಿದ್ಧ ಎಂದು ಸ್ಪಷ್ಟಪಡಿಸಿದ್ದಾರೆ. ಸಬ್

ಅರ್ಬನ್ ರೈಲ್ವೆ ಯೋಜನೆಗೆ ೧೫ ಸಾವಿರದ ೭೬೭ ಕೋಟಿ ರೂಪಾಯಿ ನೀಡಲಾಗಿದೆ. ಬೆಂಗಳೂರಿನ ಸಂಚಾರ ದಟ್ಟಣೆ ನೀಗಿಸಲು ಸಬ್ ಅರ್ಬನ್ ರೈಲು, ಮೆಟ್ರೋ ರೈಲು, ವರ್ತುಲ ರೈಲು ಯೋಜನೆಗಳಿಗೆ ಅನುಮೋದನೆ ನೀಡಲಾಗಿದೆ. ಕೆ. ರೈಟ್ಸ್ ಸಂಸ್ಥೆಯಲ್ಲಿ ತಾಂತ್ರಿಕ ನೈಪುಣ್ಯತೆಯುಳ್ಳ ಅಧಿಕಾರಿಗಳ ಕೊರತೆಯಿಂದ ರೈಲು ಯೋಜನೆ ಕುಂಟುತ್ತಾ ಸಾಗಿದೆ. ರಾಜ್ಯ ಸರ್ಕಾರ ತಕ್ಷಣವೇ ತಾಂತ್ರಿಕ ನೈಪುಣ್ಯತೆ ಇರುವ ವ್ಯವಸ್ಥಾಪಕ ನಿರ್ದೇಶಕರನ್ನು ನೇಮಿಸುವಂತೆ ಒತ್ತಾಯಿಸಿದ್ದಾರೆ.

ಧ್ವನಿ : ಅಶ್ವಿನಿ ವೈಷ್ಣವ್ (೩೦ ಸೆಕೆಂಡ್ಸ್)

ಬೆಂಗಳೂರಿನ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ರೈಲ್ವೆ ಸಂಪರ್ಕ ಕಲ್ಪಿಸಲು ಯೋಜನೆ ಸಿದ್ಧಗೊಳಿಸಲಾಗಿದೆ ಎಂದು ಅವರು ಹೇಳಿದ್ದಾರೆ. ಬೆಂಗಳೂರಿನಿಂದ ಆಗಮಿಸುವ ಹಾಗೂ ನಿರ್ಗಮಿಸುವ ರೈಲುಗಳ ಸಂಖ್ಯೆಯನ್ನು ಸರಿಸುಮಾರು ೨೦೦ ರಿಂದ ೪೦೦ಕ್ಕೆ ಹೆಚ್ಚಿಸಲು ಪ್ರಯತ್ನ ನಡೆಯುತ್ತಿದೆ ಎಂದು ಹೇಳಿದ್ದಾರೆ. ಇದೇ ವೇಳೆ ಬೆಂಗಳೂರಿನಲ್ಲಿ ಮೆಟ್ರೋ ದರ ಏರಿಕೆಗೆ ರಾಜ್ಯ ಸರ್ಕಾರವೇ ಕಾರಣ ಎಂದು ಅವರು ದೂರಿದ್ದಾರೆ.

**<><*<><>*><>**

ಗೋದಾವರಿ, ಕೃಷ್ಣ, ಕಾವೇರಿ, ನದಿ ನೀರು ಜೋಡಣೆಯ ನೀರಾವರಿ ಯೋಜನೆಯಡಿ ರಾಜ್ಯಕ್ಕೆ ೨೫ ಟಿಎಂಸಿ ನೀರು ಕೊಡಬೇಕು ಎಂದು ಮಾಜಿ ಪ್ರಧಾನಿ ದೇವೇಗೌಡ ಒತ್ತಾಯಿಸಿದ್ದಾರೆ. ಈ ಕುರಿತು ಇಂದು ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಸಂಬಂಧ ಕೇಂದ್ರ ಜಲಶಕ್ತಿ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಅವರಿಗೆ ಪತ್ರ ಬರೆದಿರುವುದಾಗಿ ತಿಳಿಸಿದ್ದಾರೆ. ಗೋದಾವರಿ, ಕಾವೇರಿ, ನದಿ ನೀರು ಜೋಡಣೆ ಯೋಜನೆಯಿಂದ ರಾಜ್ಯಕ್ಕೆ ಗೋದಾವರಿ ನೀರನ್ನು ಹಂಚಿಕೆ ಮಾಡದಿರುವ ಕೇಂದ್ರ ಜಲಶಕ್ತಿ ಸಚಿವಾಲಯದ ನಿರ್ಧಾರದಿಂದ ಆಘಾತವಾಗಿದೆ ಎಂದು ತಿಳಿಸಿದ್ದಾರೆ. ರಾಜ್ಯಕ್ಕೆ ೨೫ ಟಿಎಂಸಿ ನೀರು ತರುವ ಪ್ರಯತ್ನ ಮಾಡಲಾಗುವುದು ಎಂದು ಭರವಸೆ ನೀಡಿದ್ದಾರೆ. ಇದೇ ವೇಳೆ ನೀರಾವರಿ ವಿಚಾರದಲ್ಲಿ ರಾಜಕೀಯ ಮಾಡುವುದಿಲ್ಲ ಎಂದು ತಿಳಿಸಿದ್ದಾರೆ. ರಾಜ್ಯ ಸರ್ಕಾರದ ಜೊತೆ ನೀರಾವರಿ ವಿಚಾರದಲ್ಲಿ ಮಾತನಾಡಲು ಸಿದ್ಧವಿರುವುದಾಗಿ ಹೇಳಿದ್ದಾರೆ. ಕಾವೇರಿ ನದಿ ನೀರು ಕೊರತೆಯಿರುವ ಜಲಾನಯದ ಪ್ರದೇಶವಾಗಿದ್ದು, ಕರ್ನಾಟಕವು ತಮಿಳುನಾಡಿಗಿಂತ ಹೆಚ್ಚಿನ ಬರಪೀಡಿತ ತಾಲೂಕುಗಳನ್ನು ಹೊಂದಿದೆ ಎಂದು ಅವರು ತಿಳಿಸಿದ್ದಾರೆ.

**<><*<><>*><>**

ದೇಶ ಕಾಯುವ ಯೋಧರು, ಅರೆಸೇನಾಪಡೆ ಯೋಧರು ಹಾಗೂ ನಿವೃತ್ತ ಯೋಧರ ಸಮಸ್ಯೆಗಳ ಬಗ್ಗೆ ಕೇಂದ್ರ ರಕ್ಷಣಾ ಸಚಿವರ ಬಳಿ ಚರ್ಚಿಸಿ ಬಗೆಹರಿಸಲು ಪ್ರಾಮಾಣಿಕ ಪ್ರಯತ್ನ ಮಾಡುವುದಾಗಿ ಕೇಂದ್ರದ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ. ಕುಮಾರಸ್ವಾಮಿ ತಿಳಿಸಿದ್ದಾರೆ. ಹಾಸನದ ಕೆಂಚಟ್ಟಹಳ್ಳಿಯಲ್ಲಿ ಇಂದು ನಿವೃತ್ತ ಯೋಧರ ಒಕ್ಕೂಟ ಮತ್ತು ಅರೆಸೇನಾ ಪಡೆ ವತಿಯಿಂದ ನಿರ್ಮಾಣ ಮಾಡಲಾಗಿರುವ ನೂತನ ಅರೆಸೇನಾಪಡೆ ಯೋಧರ ಭವನ ಉದ್ಘಾಟಿಸಿ ಮಾತನಾಡಿದ ಅವರು, ಮುಂದಿನ ದಿನಗಳಲ್ಲಿ ರಾಜ್ಯದ ಯೋಧರು ಹಾಗೂ ನಿವೃತ್ತ ಸೈನಿಕರಿಗಾಗಿ ಹೊಸ ಕಾರ್ಯಕ್ರಮಗಳನ್ನು ಜಾರಿಗೆ ತರುವ ನಿಟ್ಟಿನಲ್ಲಿ ರಕ್ಷಣಾ ಸಚಿವರೊಂದಿಗೆ ಚರ್ಚಿಸುವುದಾಗಿ ಭರವಸೆ ನೀಡಿದ್ದಾರೆ.

ಧ್ವನಿ : ಹೆಚ್.ಡಿ. ಕುಮಾರಸ್ವಾಮಿ

<><*<><>*><>

ವಿಶ್ವ ವಿದ್ಯಾನಿಲಯಗಳನ್ನು ಮುಚ್ಚುವ ರಾಜ್ಯ ಸರ್ಕಾರದ ನಿರ್ಧಾರ ವಿರುದ್ಧ ಪ್ರತಿಪಕ್ಷ ನಾಯಕ ಆರ್. ಅಶೋಕ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಇದರಿಂದಾಗಿ ರಾಜ್ಯದ ವಿದ್ಯಾರ್ಥಿಗಳು ಉನ್ನತ ವ್ಯಾಸಂಗಕ್ಕಾಗಿ ಪಕ್ಕದ ರಾಜ್ಯಗಳಿಗೆ ವಲಸೆ ಹೋಗಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು. ಯುವ ಜನರು ಪದವೀಧರರಾಗುವುದನ್ನು ತಪ್ಪಿಸಲು ಈ ರೀತಿ ಮಾಡಲಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

<><*<><>*><>

ಮೈಸೂರಿನ ಘಟನೆ ಪೂರ್ವ ನಿಯೋಜಿತವಾಗಿದ್ದು, ಸಂಪೂರ್ಣ ತನಿಖೆಯಾಗಬೇಕೆಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹುಬ್ಬಳ್ಳಿಯಲ್ಲಿ ಆಗ್ರಹಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು, ಇದು ಅತ್ಯಂತ ಗಂಭೀರವಾದ ವಿಷಯ ಎಂದು ಅವರು ತಿಳಿಸಿದ್ದಾರೆ. ಗಲಭೆಕೋರರಿಂದ ಆಸ್ತಿ ನಷ್ಟವನ್ನು ವಸೂಲಿ ಮಾಡಬೇಕು ಎಂದು ಅವರು ಒತ್ತಾಯಿಸಿದ್ದಾರೆ.

<><*<><>*><>

ತುಮಕೂರು ಜಿಲ್ಲೆಯಲ್ಲಿ ಹೆಚ್‌ಎಎಲ್ ಲಘು ಹೆಲಿಕಾಪ್ಟರ್ ಘಟಕ ಕಾರ್ಯಾಚರಣೆ ಮಾಡುತ್ತಿರುವುದರ ಹಿನ್ನೆಲೆಯಲ್ಲಿ ನಗರದ ಮಧ್ಯ ಭಾಗದಲ್ಲಿ ೫೦ ಲಕ್ಷ ಬೆಲೆ ಬಾಳುವ ಹೆಲಿಕಾಪ್ಟರ್ ಅನ್ನು ಸಾರ್ವಜನಿಕರ ಪ್ರದರ್ಶನಕ್ಕೆ ಇಡಲಾಗುವುದು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ತುಮಕೂರಿನಲ್ಲಿ ಹೆಲಿಕಾಪ್ಟರ್ ವೇದಿಕೆ ನಿರ್ಮಾಣಕ್ಕೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದ ಅವರು, ಇದರಿಂದ ಜಿಲ್ಲೆಯ ಹಾಗೂ ಹೊರಗಿನಿಂದ ಬರುವವರಿಗೂ ಹೆಲಿಕಾಪ್ಟರ್ ತಯಾರಿಕಾ ಕಾರ್ಖಾನೆ ಬಗ್ಗೆ ತಿಳಿಯಲಿದೆ ಎಂದು ಹೇಳಿದ್ದಾರೆ.

<><*<><>*><>

ಬೆಂಗಳೂರು ಗ್ರಾಮಾಂತರ ಜಿಲ್ಲಾ ಕೃಷಿ ತರಬೇತಿ ಕೇಂದ್ರ ವತಿಯಿಂದ ದೊಡ್ಡಬಳ್ಳಾಪುರ ತಾಲೂಕಿನ ಕೃಷಿ ವಿಜ್ಞಾನ ಕೇಂದ್ರ. ಹಾಡೋನಹಳ್ಳಿ ಆವರಣದಲ್ಲಿ ರೈತರಿಗಾಗಿ ಅಟಲ್ ಭೂಜಲ್ ಯೋಜನೆಯ ಕುರಿತು ತರಬೇತಿ ಕಾರ್ಯಾಗಾರ ಹಮ್ಮಿಕೊಳ್ಳಲಾಗಿತ್ತು. ಬೆಂಗಳೂರು ಕೃಷಿ ಇಲಾಖೆ ಉಪ ನಿರ್ದೇಶಕರಾದ ಗಾಯತ್ರಿ ಮಾತನಾಡಿ ಜಿಲ್ಲೆಯಲ್ಲಿ ಈಗ ಅಂತರ್ಜಲ ಕಡಿಮೆಯಾಗಿ ೧ ಸಾವಿರದ ೬೦೦ ಅಡಿ ಆಳ ಹೋದರು ಬೋರ್‌ವೆಲ್ ನಲ್ಲಿ ನೀರು ಸಿಗುತ್ತಿಲ್ಲ. ಆದ್ದರಿಂದ ಮಳೆ ನೀರನ್ನು ಕೃಷಿ ಹೊಂಡದ ಮೂಲಕ ಹಾಗು ವಿವಿಧ ಕ್ರಮಗಳ ಮೂಲಕ ನೀರನ್ನು ಸದ್ಬಳಕೆ ಮಾಡಿಕೊಳ್ಳುವಂತೆ ಸಲಹೆ ನೀಡಿದ್ದಾರೆ.

<><*<><>*><>

ಸಂತ ಸೇವಾಲಾಲರು ಬಂಜಾರ ಸಮುದಾಯದ ಆರಾಧ್ಯ ದೈವ, ಅವರ ಚಿಂತನೆಗಳನ್ನು ಸಮಾಜ ಅರ್ಥ ಮಾಡಿಕೊಂಡು ಸನ್ಮಾರ್ಗದಲ್ಲಿ ನಡೆಯಬೇಕು ಎಂದು ಚಿಕ್ಕಬಳ್ಳಾಪುರ ಜಿಲ್ಲೆಯ ಅಪರ ಜಿಲ್ಲಾಧಿಕಾರಿ ಡಾ.ಎನ್.ಭಾಸ್ಕರ್ ತಿಳಿಸಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವಿವಿದೆಡೆಗಳಲ್ಲಿ ಇಂದು ಸಂತ ಸೇವಾಲಾಲ್ ಜಯಂತಿ ಆಚರಿಸಲಾಯಿತು. ಭೂಮಿಯ ಮೇಲಿರುವ ಸಕಲ ಜೀವರಾಶಿಗಳಿಗೂ ಒಳ್ಳೆಯದನ್ನೇ ಬಯಸಿದವರು ಸಂತ ಶ್ರೀ ಸೇವಾಲಾಲ್ ಎಂದು ಚಿತ್ರದುರ್ಗ ಜಿಲ್ಲೆಯ ಕೊಳಹಾಳ್ ಸರ್ಕಾರಿ ಪ್ರೌಢಶಾಲೆ ಶಿಕ್ಷಕ ಹಾಗೂ ಸಾಹಿತಿ ಖಂಡೂ ಬಂಜಾರ ತಿಳಿಸಿದ್ದಾರೆ.

<><*<><>*><>

ಸಂಕ್ಷಿಪ್ತ ಸುದ್ದಿಗಳು

೧. ಹಾಸನ ನಗರದ ಭುವನಹಳ್ಳಿಯಲ್ಲಿ ನಡೆಯುತ್ತಿರುವ ವಿಮಾನ ನಿಲ್ದಾಣ ಕಾಮಗಾರಿ ಸ್ಥಳಕ್ಕೆ ಇಂದು ಕೇಂದ್ರದ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಎಚ್.ಡಿ ಕುಮಾರಸ್ವಾಮಿ ಭೇಟಿ ನೀಡಿ ಪರಿಶೀಲನೆ ನಡೆಸಿದರು.

೨. ಮಂಡ್ಯ ವಿಶ್ವವಿದ್ಯಾನಿಲಯವನ್ನು ಯಾವುದೇ ಕಾರಣಕ್ಕೂ ಮೈಸೂರು ವಿವಿಯೊಂದಿಗೆ ವಿಲೀನ ಮಾಡಬಾರದೆಂದು ವಿಧಾನಪರಿಷತ್ ಸದಸ್ಯ ಕೆ.ವಿವೇಕಾನಂದ ರಾಜ್ಯ ಸರ್ಕಾರವನ್ನು ಒತ್ತಾಯಿಸಿದ್ದಾರೆ.

೩. ಬಿಬಿಎಂಪಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ, ಅಧ್ಯಕ್ಷ ಜಿ.ಕೃಷ್ಣಪ್ಪ ಬೆಂಗಳೂರಿನ ಬೊಮ್ಮನಹಳ್ಳಿ ವಿಧಾನ ಸಭಾ ಕ್ಷೇತ್ರದ ಕಛೇರಿಯಲ್ಲಿ ಸಭೆ ನಡೆಸಿ, ಗ್ಯಾರಂಟಿ ಯೋಜನೆಗಳ ಪರಿಣಾಮಕಾರಿ ಅನುಷ್ಠಾನದ ಬಗ್ಗೆ ಚರ್ಚಿಸಿದ್ದಾರೆ.

೪. ಗದಗದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗದ ಜನಾಂಗದವರ ಶ್ರೇಯಸ್ಸಿಗಾಗಿ ಪ್ರೋತ್ಸಾಹಿಸಿ ಶ್ರಮಿಸಿ, ಗಣನೀಯ ಸೇವೆ ಸಲ್ಲಿಸಿದ ಅರ್ಹ ವ್ಯಕ್ತಿಗಳನ್ನು ಗುರುತಿಸಿ ೨೦೨೫-೨೬ನೇ ಸಾಲಿನಲ್ಲಿ ಡಾ. ಬಾಬು ಜಗಜೀವನರಾಮ್ ಹಾಗೂ ಡಾ. ಬಿಆರ್ ಅಂಬೇಡ್ಕರ್ ಪ್ರಶಸ್ತಿಗಳನ್ನು ನೀಡಿ ಗೌರವಿಸಲು ಸರ್ಕಾರ ಉದ್ದೇಶಿಸಿದೆ. ಅರ್ಜಿಗಳನ್ನು ಉಪನಿರ್ದೇಶಕರ ಕಛೇರಿ ಸಮಾಜ ಕಲ್ಯಾಣ ಇಲಾಖೆ ಇದೇ ೨೫ ರೊಳಗೆ ಸಲ್ಲಿಸಲು ಕೋರಲಾಗಿದೆ.

೫. ಐತಿಹಾಸಿಕ ಪ್ರವಾಸಿ ತಾಣ, ಸ್ಮಾರಕಗಳ ದರ್ಶನ ಮಾಡುವ ಮೂಲಕ ವಿದ್ಯಾರ್ಥಿಗಳು ಇತಿಹಾಸ, ಕಲೆ, ಸಂಸ್ಕೃತಿ, ಐತಿಹಾಸಿಕ ಸ್ಥಳಗಳ ಮಹತ್ವ ತಿಳಿದು ಜ್ಞಾನದ ಅರಿವು ಹೆಚ್ಚಿಸಿಕೊಳ್ಳಲು ಕರ್ನಾಟಕ ದರ್ಶನ ಪ್ರವಾಸ ಕಾರ್ಯಕ್ರಮವು ಸಹಾಯಕಾರಿಯಾಗಲಿದೆ ಎಂದು ವಿಜಯಪುರ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅಭಿಪ್ರಾಯಪಟ್ಟಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>